**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ ರವರು ನಿಯಮ 72ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

ವಿಷಯ:

ಚಿಕ್ಕೋಡಿ ಹಾಗು ಬೆಳಗಾವಿ ದಕ್ಷಿಣ ಶೈಕ್ಷಣಿಕ ಜಿಲ್ಲೆಗಳಲ್ಲಿನ ಕೆಲವು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ ಕೊಠಡಿಗಳು, ಇತ್ತೀಚೆಗೆ ಬಿದ್ದ ಭಾರಿ ಮಳೆಯಿಂದಾಗಿ ಶಿಥಿಲಗೊಂಡಿದ್ದು, ಶಾಲಾ ಮಕ್ಕಳು ಪ್ರಾಣಾಪಾಯಕ್ಕೆ ಸಿಲುಕುವ ಸಂಭವವಿರುವುದರಿಂದ, ಸದರಿ ಶಾಲಾ ಕೊಠಡಿಗಳ ತುರ್ತು ದುರಸ್ತಿ ಕಾಮಗಾರಿ ಕೈಗೊಳ್ಳುವ ಕುರಿತು, ವಿಧಾನ ಪರಿಷತ್ತಿನ ದಿನಾಂಕ:23.07.2024ರ ಕಲಾಪದಲ್ಲಿ ಮಾನ್ಯ ಶಾಲಾ ಶಿಕ್ಷಣ ಹಾಗು ಸಾಕ್ಷರತಾ ಸಚಿವರ ಗಮನವನ್ನು ಸೆಳೆಯಲು ಸದರಿ ವಿಷಯ ಪ್ರಸ್ತಾಪಿಸಲು ಅನುಮತಿ ನೀಡುವಂತೆ ಕೋರಿದೆ.

ಉತ್ತರ :

ರಾಜ್ಯದ ಬಹುತೇಕ ಕಡೆಗಳಲ್ಲಿ ಕಳೆದ ಕೆಲವು ದಿನಗಳಿಂದ ತೀವ್ರವಾಗಿ ಮಳೆಯುಂಟಾಗಿದ್ದು, ಇಂತಹ ಸಂದರ್ಭದಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ಸುರಕ್ಷತೆಯ ಹಿತದೃಷ್ಟಿಯಿಂದ ಹೆಚ್ಚಿನ ಮಳೆಯಿಂದಾಗಿ ಮುಳಗಡೆಯಾಗುವ ರಸ್ತೆಗಳಿಂದ, ಶಾಲಾ ಆವರಣದಲ್ಲಿನ ಮರಗಿಡಗಳಿಂದ ಹಾಗೂ ವಿದ್ಯುತ್ ಕೇಬಲ್ಗಳಿಂದ ಮಕ್ಕಳಿಗೆ ಅಪಾಯವಾಗದಂತೆ ಮುನ್ನಚ್ಚರಿಕೆ ವಹಿಸಲು ಶಿಥಿಲಗೊಂಡ ಕೊಠಡಿಗಳಿಗೆ ಮಕ್ಕಳ ಪ್ರವೇಶವನ್ನು ನಿರ್ಬಂಧಿಸಿ ಮುನ್ನೆಚ್ಚರಿಕಾ ಕ್ರಮಗಳನ್ನು ಪಾಲಿಸಲು ದಿನಾಂಕ:15-06-2024ರಂದು ಶಾಲಾ ಶಿಕ್ಷಣ ಇಲಾಖೆಯಿಂದ ಸುತ್ತೋಲೆಯನ್ನು ಹೊರಡಿಸಲಾಗಿದೆ (ಪ್ರತಿಯನ್ನು **ಅನುಬಂಧ-1**ರಲ್ಲಿ ಲಗತ್ತಿಸಿದೆ).

ಬೆಳಗಾವಿ ಜಿಲ್ಲೆಯಲ್ಲಿ ಖಾನಾಪುರ ಹಾಗೂ ಬೆಳಗಾವಿ ಗ್ರಾಮಾಂತರ ತಾಲ್ಲೂಕುಗಳಲ್ಲಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಚಿಕ್ಕೋಡಿ ಹಾಗೂ ನಿಪ್ಪಾಣಿ ತಾಲ್ಲೂಕುಗಳಲ್ಲಿ ಅತಿ ಹೆಚ್ಚಿನ ಮಳೆಯಾಗಿರುತ್ತದೆ. ಖಾನಾಪುರ ತಾಲ್ಲೂಕಿನಲ್ಲಿ ಮಕ್ಕಳ ಹಿತದೃಷ್ಠಿಯಿಂದ 4 ದಿನಗಳ ರಜೆಯನ್ನು ಬೆಳಗಾವಿ ತಾಲ್ಲೂಕಿನಲ್ಲಿ 3 ದಿನಗಳ ರಜೆಯನ್ನು ಘೋಷಿಸಲಾಗಿದೆ.

ಮುಂದುವರೆದು, ಶಿಥಿಲಾವಸ್ಥೆಯಲ್ಲಿರುವ ಅಥವಾ ಅಪಾಯಕಾರಿಯಾಗಿರುವ ಇಂತಹ ಸನ್ನಿವೇಶಗಳ ತೀವ್ರತೆಯನ್ನು ಪರಿಗಣಿಸಿ ಅವುಗಳನ್ನು ತೆರವುಗೊಳಿಸಲು ಅಥವಾ ನೆಲಸಮಗೊಳಿಸಲು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲು ಹಾಗೂ ಶಾಲೆಗಳಲ್ಲಿ ಸಣ್ಣ ಮಟ್ಟದ ದುರಸ್ತಿಗಳಿದ್ದಲ್ಲಿ ಹಾಗೂ ಕಟ್ಟಡದಿಂದ (ಮೇಲ್ಛಾವಣಿ ಇತ್ಯಾದಿ) ನೀರು ಸೋರುವಿಕೆ ಕಂಡುಬಂದಲ್ಲಿ ಗ್ರಾಮಪಂಚಾಯ್ತಿ/ಸ್ಥಳೀಯ ಸಂಸ್ಥೆಗಳ ಸಹಕಾರದೊಂದಿಗೆ ತುರ್ತಾಗಿ ದುರಸ್ತಿಯನ್ನು ಕೈಗೊಳ್ಳಲು ಸೂಚಿಸಲಾಗಿದೆ.

ಪ್ರಸಕ್ತ ಸಾಲಿನಲ್ಲಿ ತೀವ್ರ ಮಳೆಯಿಂದಾಗಿ ಸರ್ಕಾರಿ ಶಾಲೆಯ ಯಾವುದೇ ಭಾಗ ಹಾನಿಗೊಳಗಾಗಿದ್ದಲ್ಲಿ, ತಕ್ಷಣವೇ ಸ್ಥಳ ಪರಿಶೀಲನೆಯನ್ನು ನಡೆಸಿ, ಸದರಿ ವರದಿಯೊಂದಿಗೆ ಛಾಯಾ ಚಿತ್ರಸಹಿತ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವಂತೆ ಹಾಗೂ ಜಿಲ್ಲಾಧಿಕಾರಿಗಳ ಹಂತದಲ್ಲಿ ಲಭ್ಯವಿರುವ SDRF ಅನುದಾನವನ್ನು, ಮಳೆಹಾನಿಯಿಂದಾಗಿ ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಶಾಲಾ ಕೊಠಡಿಗಳ ದುರಸ್ತಿ

ಕಾಮಗಾರಿಗಳಿಗೆ ಸದ್ಬಳಕೆ ಮಾಡಿಕೊಳ್ಳಲು ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಇವರಿಗೆ ದಿನಾಂಕ: 29–06–2024ರಂದು ಸೂಚಿಸಲಾಗಿದೆ (ಪ್ರತಿಯನ್ನು **ಅನುಬಂಧ–2** ರಲ್ಲಿ ಲಗತ್ತಿಸಿದೆ).

ರಾಜ್ಯ ಬಂಡವಾಳ ವೆಚ್ಚ ಯೋಜನೆಯಡಿ 2024–25ನೇ ಸಾಲಿನಲ್ಲಿ ಒದಗಿಸಲಾದ ಅನುದಾನದಲ್ಲಿ ದುರಸ್ತಿಗೆ ರೂ.10000.00ಲಕ್ಷಗಳ ಅನುದಾನ ನಿಗದಿಪಡಿಸಲಾಗಿದ್ದು, ಅನುದಾನದ ಲಭ್ಯತೆಗೆ ಅನುಗುಣವಾಗಿ ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳನ್ನು ಒಳಗೊಂಡಂತೆ ರಾಜ್ಯದಾದ್ಯಂತ ಶಾಲಾ ಕೊಠಡಿಗಳ ದುರಸ್ತಿಗೆ ಸಂಬಂಧಿಸಿದಂತೆ ಪ್ರಸ್ತಾವನೆ ಪಡೆದು ಪರಿಶೀಲಿಸಲಾಗುತ್ತಿದ್ದು, ಅಗತ್ಯತೆಗೆ ಅನುಗುಣವಾಗಿ ಶಾಲಾ ಕೊಠಡಿ ದುರಸ್ತಿ ಕಾರ್ಯ ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ : ಇಪಿ 240 ಯೋಸಕ 2024**

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಅನುಬಂಧ-1

ಕರ್ನಾಟಕ ಸರ್ಕಾರ

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001

---

ಸಂಖ್ಯೆ : ಎಡಿಎಂ2(4): ವಾ.ಕ್ರಿಯೋ 23-24 /ಅನುಷ್ಠಾನ-01/2024-25 ದಿನಾಂಕ : 15.06.2024.

-: ಸುತ್ತೋಲೆ :-

ವಿಷಯ : ಮಳೆ ಬರುವ ಸಂದರ್ಭದಲ್ಲಿ ರಾಜ್ಯದ ಶಾಲೆಗಳಲ್ಲಿ ಕೈಗೊಳ್ಳಬೇಕಾದ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳ ಕುರಿತು.

ಉಲ್ಲೇಖ : 1) ಈ ಕಛೇರಿಯ ಸುತ್ತೋಲೆ ಸಂಖ್ಯೆ : ಸಿ4(8): ವಾ.ಕ್ರಿ.ಯೋ.ಅ-01/2023-24 ದಿನಾಂಕ : 28.03.2024.

2) ಈ ಕಛೇರಿಯ ಸುತ್ತೋಲೆ ಸಂಖ್ಯೆ : ಯೋ7/ಶಿ.ಶಾ.ಕ.ತೆ/01/2021-22, ದಿನಾಂಕ : 19.11.2021.

3) ಈ ಕಛೇರಿಯ ಸುತ್ತೋಲೆ ಸಂಖ್ಯೆ: ಎಡಿಎಂ2(1):ಶೈ.ಮಾ-01:2022-23 ದಿನಾಂಕ: 19.05.2022 & 11.07.2022.

4) ಈ ಕಛೇರಿಯ ಸುತ್ತೋಲೆ ಸಂಖ್ಯೆ: ಎಡಿಎಂ2(4): ವಾ.ಕ್ರಿಯೋ 23-24/ ಅನುಷ್ಠಾನ-01/2022-23 ದಿನಾಂಕ: 26.07.2023.

- - -

ಉಲ್ಲೇಖ (1) ರಂತೆ 2024-25 ನೇ ಶೈಕ್ಷಣಿಕ ವರ್ಷದಲ್ಲಿ ರಾಜ್ಯಾದ್ಯಂತ ದಿನಾಂಕ : 29.05.2024 ರಿಂದ ಶಾಲೆಗಳು ಪ್ರಾರಂಭವಾಗಿರುತ್ತದೆ. ಪ್ರಸ್ತುತ, ರಾಜ್ಯದ ಬಹುತೇಕ ಕಡೆಗಳಲ್ಲಿ ಕಳೆದ ಕೆಲವು ದಿನಗಳಿಂದ ತೀವ್ರವಾಗಿ ಮಳೆಯುಂಟಾಗುತ್ತಿದ್ದು, ಇಂತಹ ಸಂದರ್ಭದಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ಸುರಕ್ಷತೆಯ ಹಿತದೃಷ್ಟಿಯಿಂದ ಈ ಕೆಳಕಂಡ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಲು ಆಯಾ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಶೈಕ್ಷಣಿಕ ಉಸ್ತುವಾರಿ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಈ ಮೂಲಕ ಮತ್ತೊಮ್ಮೆ ಸೂಚಿಸಿದೆ.

1) ಮಳೆಯಿಂದಾಗಿ ಶಿಥಿಲಾವಸ್ಥೆಯಲ್ಲಿರುವ ಕೆಲವು ಶಾಲಾ ಕಟ್ಟಡಗಳು ಯಾವುದೇ ಸಂದರ್ಭದಲ್ಲಿ ಹಾನಿಗೊಳಗಾಗುವ ಅಥವಾ ಬಿದ್ದು ಹೋಗುವ ಸಂಭವವಿರುತ್ತದೆ. ಪ್ರಯುಕ್ತ, ಅಂತಹ ಶಾಲಾ ಕಟ್ಟಡಗಳನ್ನು, ತರಗತಿಯ ಕೊಠಡಿಗಳನ್ನು ಮತ್ತು ಶೌಚಾಲಯಗಳನ್ನು ಬಳಸದೇ, ಸಮೀಪದ ಸುಸ್ಥಿತಿಯಲ್ಲಿರುವ ಕಟ್ಟಡ, ಕೊಠಡಿಗಳನ್ನು ಹಾಗೂ ಶೌಚಾಲಯಗಳನ್ನು ಗುರುತಿಸಿ ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳುವುದು. ವಿದ್ಯಾರ್ಥಿಗಳು ಇಂತಹ ಕಟ್ಟಡಗಳ, ಕೊಠಡಿಗಳ, ಶೌಚಾಲಯಗಳ, ಕಾಂಪೌಂಡ್‌ಗಳ ಹಾಗೂ ಶಾಲಾ ಆವರಣದಲ್ಲಿನ ಮರಗಳ ಸಮೀಪದಲ್ಲಿ ಸುತ್ತಾಡದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸತಕ್ಕದ್ದು. ಶಿಥಿಲಾವಸ್ಥೆಯಲ್ಲಿರುವ ಅಥವಾ ಅಪಾಯಕಾರಿಯಾಗಿರುವ ಇಂತಹ ಸನ್ನಿವೇಶಗಳ ತೀವ್ರತೆಯನ್ನು ಪರಿಗಣಿಸಿ ಅವುಗಳನ್ನು ತೆರವುಗೊಳಿಸಲು ಅಥವಾ ನೆಲಸಮಗೊಳಿಸಲು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.

2) ಕೆಲವೆಡೆ ತೀವ್ರ ಮಳೆಯಿಂದಾಗಿ ಪ್ರವಾಹ ಅಥವಾ ನೆರೆ ಬಂದು ವಿದ್ಯಾರ್ಥಿಗಳು ಶಾಲೆಗಳಿಗೆ ಬಂದು ಹೋಗಲು ತೊಂದರೆಯುಂಟಾಗುವ ಅಥವಾ ಕೆಲವು ಸಂದರ್ಭಗಳಲ್ಲಿ ಮಳೆಯಿಂದಾಗಿ ಶಾಲೆಗಳ ಕೊಠಡಿಗಳಲ್ಲಿ ಮತ್ತು ಆವರಣದೊಳಗೆ ನೀರು ಸಂಗ್ರಹವಾಗುವ ಸಂಭವವಿರುತ್ತದೆ.



Scanned with ACE Scanner

3) ಇಂತಹ ಸಂದರ್ಭಗಳಲ್ಲಿ ಸ್ಥಳೀಯ ಗ್ರಾಮ ಪಂಚಾಯತಿ, ಪುರ ಸಭೆ, ನಗರ ಸಭೆ, ಮಹಾನಗರ ಪಾಲಿಕೆಗಳ (ಸ್ಥಳೀಯ ಸಂಸ್ಥೆಗಳ) ಸಹಕಾರದಿಂದ ಶಾಲಾ ಕಟ್ಟಡದಲ್ಲಿ ಅಥವಾ ಆವರಣದಲ್ಲಿ ಸಂಗ್ರಹವಾಗಿರುವ ನೀರನ್ನು ತೆರವುಗೊಳಿಸುವುದು.

4) ಇಂತಹ ಸನ್ನಿವೇಶಗಳಲ್ಲಿ ಅಗತ್ಯಾನುಸಾರ / ಸಂದರ್ಭಾನುಸಾರ ಶಾಲಾ ಮುಖ್ಯೋಪಾಧ್ಯಾಯರು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಜಿಲ್ಲಾ ಉಪನಿರ್ದೇಶರು(ಆಡಳಿತ) ರವರ ಪೂರ್ವಾನುಮತಿ ಪಡೆದು ಶಾಲೆಗಳಿಗೆ ರಜೆಯನ್ನು ಘೋಷಿಸುವುದು. ಅಂತಹ ರಜಾ ದಿನಗಳಲ್ಲಿನ ಪಾಠ-ಪ್ರವಚನಗಳನ್ನು ಮುಂದಿನ ಸರ್ಕಾರಿ ರಜಾ ದಿನಗಳಲ್ಲಿ ಸರಿದೂಗಿಸುವಂತೆ ಸೂಚಿಸಿದೆ.

5) ಶಾಲಾ ಆವರಣದಲ್ಲಿ ತೆರೆದ ಸಂಪು/ಪಿಟ್/ಫೌಂಡೇಷನ್ ಪಿಟ್/ತೆರೆದ ಗುಂಡಿ/ಮ್ಯಾನ್ ಹೋಲ್ ಇತ್ಯಾದಿಗಳು ಇದ್ದಲ್ಲಿ ಅವುಗಳನ್ನು ಯಾವುದೇ ಕಾರಣಕ್ಕೂ ತೆರೆದಿಡದೇ ಸುರಕ್ಷಿತವಾಗಿರಿಸುವ/ಭದ್ರಗೊಳಿಸುವ ಕುರಿತು ಅಗತ್ಯ ಕ್ರಮವಹಿಸುವುದು ಹಾಗೂ ವಿದ್ಯಾರ್ಥಿಗಳು ಅವುಗಳ ಬಳಿ ಹೋಗದಂತೆ ಮುನ್ನೆಚ್ಚರಿಕೆ ವಹಿಸುವುದು.

6) ವಿದ್ಯುಚ್ಛಕ್ತಿ ಸಂಪರ್ಕ ಪಡೆದಿರುವ wire/cable ಗಳು ಯಾವುದೇ ಕಾರಣಕ್ಕೂ ನೆಲದ ಮೇಲೆ ಹಾದು ಹೋಗದಂತೆ ಹಾಗೂ ವಿದ್ಯಾರ್ಥಿಗಳಿಗೆ ಎಟುಕದಂತೆ ಕ್ರಮವಹಿಸುವುದು ಮತ್ತು ಸುರಕ್ಷಿತವಲ್ಲದ ವಿದ್ಯುತ್ ಸಂಪರ್ಕದಿಂದ ಸಂಭವಿಸಬಹುದಾದ ಅವಘಡಗಳ ಬಗ್ಗೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸುವುದು. ಇಂತಹ ಪ್ರಕರಣಗಳಲ್ಲಿ ಈ ಕಛೇರಿಯ ಸುತ್ತೋಲೆ ಸಂಖ್ಯೆ: ಎಡಿಎಂ2(4)/ಶಾ.ಆ.ವಿ-31/ 2021-22 ದಿನಾಂಕ: 13.09.2021 ರಂತೆ ನಿಯಮಾನುಸಾರ ಸೂಕ್ತ ಕ್ರಮಗಳನ್ನು ವಹಿಸತಕ್ಕದ್ದು.

7) ಶಾಲೆಗಳಲ್ಲಿ ಸಣ್ಣ ಮಟ್ಟದ ದುರಸ್ತಿಗಳಿದ್ದಲ್ಲಿ ಹಾಗೂ ಕಟ್ಟಡದಿಂದ (ಮೇಲ್ಛಾವಣಿ ಇತ್ಯಾದಿ) ನೀರು ಸೋರುವಿಕೆ ಕಂಡುಬಂದಲ್ಲಿ ಗ್ರಾಮಪಂಚಾಯ್ತಿ/ಸ್ಥಳೀಯ ಸಂಸ್ಥೆಗಳ ಸಹಕಾರದೊಂದಿಗೆ ತುರ್ತಾಗಿ ದುರಸ್ತಿಯನ್ನು ಕೈಗೊಳ್ಳುವುದು.

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಹಾಗೂ ಉಲ್ಲೇಖ (2), (3) ಮತ್ತು (4) ರ ಸುತ್ತೋಲೆಗಳಲ್ಲಿ ಈ ಸಂಬಂಧ ಈಗಾಗಲೇ ತಿಳಿಸಿರುವ ಎಲ್ಲಾ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಹಾಗೂ ಸ್ಥಳೀಯ ಆರೋಗ್ಯ ಇಲಾಖೆ, ಸ್ಥಳೀಯ ಸಂಸ್ಥೆಗಳ ಮತ್ತು ತಾಲ್ಲೂಕು/ಜಿಲ್ಲಾಡಳಿತಗಳ ಸಹಕಾರದೊಂದಿಗೆ/ಮಾರ್ಗದರ್ಶನದೊಂದಿಗೆ ಅಗತ್ಯ ಕ್ರಮಗಳನ್ನು ಸಕಾಲದಲ್ಲಿ ಕೈಗೊಳ್ಳುವುದು. ಮಳೆಯಿಂದ ಯಾವುದೇ ವಿದ್ಯಾರ್ಥಿ ಅಥವಾ ವಿದ್ಯಾರ್ಥಿಗಳಿಗೆ ಶಾಲೆಯಲ್ಲಿ, ಶಾಲೆಯ ಆವರಣದಲ್ಲಿ ಹಾಗೂ ಶಾಲೆಯ ಸುತ್ತ-ಮುತ್ತ ಯಾವುದೇ ರೀತಿಯ ತೊಂದರೆ ಅಥವಾ ಜೀವ ಹಾನಿ ಆಗದಂತೆ ಅಗತ್ಯ ಮುನ್ನೆಚ್ಚರಿಕಾ ಹಾಗೂ ಸುರಕ್ಷತಾ ಕ್ರಮಗಳನ್ನು ತೆಗೆದುಕೊಂಡು ಶಾಲೆಗಳನ್ನು ನಡೆಸಿಕೊಂಡು ಹೋಗುವಂತೆ ಈ ಮೂಲಕ ಸೂಚಿಸಿದೆ. ಪ್ರತಿ ವರ್ಷ ಇಂತಹ ಸನ್ನಿವೇಶಗಳಲ್ಲಿ ಮೇಲ್ಕಂಡ ನಿರ್ದೇಶನಗಳನ್ನು ಚಾಚೂ ತಪ್ಪದೇ ಪಾಲಿಸುವಂತೆ ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಮತ್ತು ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರಿಗೆ ಈ ಮೂಲಕ ತಿಳಿಸಲಾಗಿದೆ.

ಆಯುಕ್ತರು

ಶಾಲಾ ಶಿಕ್ಷಣ ಇಲಾಖೆ

ಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) / (ಅಭಿವೃದ್ಧಿ), ಶಾಲಾ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ [ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರ ಮುಖಾಂತರ].
3. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯಸ್ಥರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ).



Scanned with ACE Scanner

ಅನುಬಂಧ-2

ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01

---

ಸಂಖ್ಯೆ: ಯೋ೪/ಸ.ಶಾ.ಕೊ.ದು/01/2024-25(E-1411767) ದಿನಾಂಕ:29.06.2024

ಇವರಿಗೆ,

ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ)

ಶಾಲಾ ಶಿಕ್ಷಣ ಇಲಾಖೆ

ವಿಷಯ: ರಾಜ್ಯದ ಬಹುತೇಕ ಭಾಗಗಳಲ್ಲಿ ತೀವ್ರ ಮಳೆಯಾಗುತ್ತಿರುವುದರಿಂದ ಶಾಲಾ ಕೊಠಡಿಗಳ ದುರಸ್ಥಿ ಕಾಮಗಾರಿಗಳನ್ನು SDRF ಅಡಿಯಲ್ಲಿರುವ ಅನುದಾನವನ್ನು ಬಳಕೆ ಮಾಡಿಕೊಳ್ಳುವ ಕುರಿತು

* * * * *

ವಿಷಯಕ್ಕೆ ಸಂಬಂಧಿಸಿದಂತೆ 2024-25 ನೇ ಶೈಕ್ಷಣಿಕ ವರ್ಷದಲ್ಲಿ ರಾಜ್ಯಾದ್ಯಂತ ಈಗಾಗಲೇ ಸರ್ಕಾರಿ ಶಾಲೆಗಳು ಪ್ರಾರಂಭವಾಗಿರುತ್ತದೆ. ಪ್ರಸ್ತುತ ರಾಜ್ಯದ ಬಹುತೇಕ ಕಡೆಗಳಲ್ಲಿ ತೀವ್ರವಾಗಿ ಮಳೆಯುಂಟಾಗುತ್ತಿದ್ದು, ಶಾಲೆಗಳನ್ನು ನಡೆಸುವ ಸಂದರ್ಭದಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ಸುರಕ್ಷತೆಯ ಹಿತದೃಷ್ಟಿಯಿಂದ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಬೇಕಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ತೀವ್ರ ಮಳೆಯಿಂದಾಗಿ ಸರ್ಕಾರಿ ಶಾಲೆಯ ಯಾವುದೇ ಭಾಗ ಹಾನಿಗೊಳಗಾಗಿದ್ದಲ್ಲಿ, ತಕ್ಷಣವೇ ಸ್ಥಳ ಪರಿಶೀಲನೆಯನ್ನು ನಡೆಸಿ, ಸದರಿ ವರದಿಯೊಂದಿಗೆ ಛಾಯಚಿತ್ರಸಹಿತ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವಂತೆ ತಿಳಿಸಿದೆ. ಮುಂದುವರೆದು, ಜಿಲ್ಲಾಧಿಕಾರಿಗಳ ಹಂತದಲ್ಲಿ ಲಭ್ಯವಿರುವ SDRF ಅಡಿಯಲ್ಲಿರುವ ಅನುದಾನವನ್ನು, ಮಳೆಹಾನಿಯಿಂದಾಗಿ ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಶಾಲಾ ಕೊಠಡಿಗಳ ದುರಸ್ಥಿ ಕಾಮಗಾರಿಗಳಿಗೆ ಸದ್ಬಳಕೆ ಮಾಡಿಕೊಳ್ಳಲು ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

ಆಯುಕ್ತರು, ಶಾ.ಶಿ.ಇ

ಬೆಂಗಳೂರು